## ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ವಿಶೇಷ ನ್ಯಾಯಾಧೀಶರ ನ್ಯಾಯಾಲಯ, ಹಾವೇರಿ.

## ಪ್ರಕರಣ ಸಂಖ್ಯೆ: ಸ್ಪೆಷಲ್ ಎಸ್.ವಿ.ಸಿ. 2/2021

**ಪಿರ್ಯಾದಿದಾರರು** – ರಾಜ್ಯದ ಪರವಾಗಿ
ಪ್ರಾಜ್ಞ ವಿಶೇಷ ಸರ್ಕಾರಿ ಅಭಿಯೋಜಕರು,
ಹಾವೇರಿ.

**– ವಿರುದ್ಧ –**

**ಆರೋಪಿ** – 1. ಪರಶುರಾಮ ತುಳಜಾರಾಮ ಶಹಪೂರ

## :: ದೋಷಾರೋಪಣೆ ::

ಹಾವೇರಿಯ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ವಿಶೇಷ ನ್ಯಾಯಾಧೀಶರಾದ ಶ್ರೀ ಕೆ.ಸಿ.ಸದಾನಂದಸ್ವಾಮಿ ; ನಾನು ಈ ಕೆಳಕಂಡ ಆರೋಪಿಯಾದ -

1. ಪರಶುರಾಮ ತಂದೆ ತುಳಜಾರಾಮ ಶಹಪೂರ,
ವಯಾ: 35 ವರ್ಷ, ಉ: ದ್ವಿ.ದಿ.ಸ., ತಹಶೀಲ್ದಾರ ಕಛೇರಿ,
ವಾಸ ಸ್ಥಳ: ಹಾವೇರಿ, ಹಾವೇರಿ ತಾ.

ನಿಮ್ಮ ಮೇಲೆ ಹೊರಿಸುವ ದೋಷಾರೋಪಣೆ ಏನೆಂದರೆ,

1ನೇ ಆರೋಪಿಯು ಹಾವೇರಿಯ ತಹಶೀಲ್ದಾರ ಕಛೇರಿಯಲ್ಲಿ ದ್ವಿತೀಯ ದರ್ಜೆ ಸಹಾಯಕರು ಅಂತಾ ಕರ್ತವ್ಯ ನಿರ್ವಹಿಸುತ್ತಿದ್ದು, ಚಾಸಾ-1 ಕಲವೀರಗೌಡ ಪಾಟೀಲ ಇವರಿಗೆ ನಿರಾಕ್ಷೇಪಣಾ ಪ್ರಮಾಣ ಪತ್ರ ನೀಡಲು ಸುಮಾರು 7-8 ತಿಂಗಳಿನಿಂದ ಸತಾಯಿಸುತ್ತಾ ಬಂದಿದ್ದಲ್ಲದೇ ಚಾಸಾ-1 ರವರಿಗೆ 1ನೇ ಆರೋಪಿಯು ರೂ.5,000/- ಲಂಚದ ಹಣಕ್ಕೆ ಬೇಡಿಕೆ ಇಟ್ಟಿದ್ದು, ದಿನಾಂಕ:05/03/2020 ರಂದು 1ನೇ ಆರೋಪಿಯು ತನ್ನ ಅಧೀನದಲ್ಲಿ ಕೆಲಸ ಮಾಡುತ್ತಿದ್ದ ಮರಿಯಪ್ಪ ಗುತ್ತೆಣ್ಣನವರ ರವರ ಮುಖಾಂತರ ರೂ.3,000/-ಗಳನ್ನು ಸ್ವೀಕರಿಸಿ ಪಡೆದುಕೊಂಡಾಗ, 1ನೇ ಆರೋಪಿಯು ಸಿಕ್ಕಿ ಬಿದ್ದು, ಆ ಮೂಲಕ 1ನೇ ಆರೋಪಿಯು ಪಿ.ಸಿ. ಕಾಯ್ದೆ-1988 ರ ಕಲಂ.7(a) (ತಿದ್ದುಪಡಿ ಕಾಯ್ದೆ -2018) ರಡಿಯ ಶಿಕ್ಷಾರ್ಹ ಅಪರಾಧವನ್ನು ಎಸಗಿರುತ್ತಾರೆ ಮತ್ತು ಅದು ಈ ನ್ಯಾಯಾಲಯದ ಸಂಜ್ಞೆಯಲ್ಲಿದೆ.

ಈ ಮೇಲೆ ಹೇಳಿದ ದೋಷಾರೋಪಣೆಗಳಿಗಾಗಿ ಈ ನ್ಯಾಯಾಲಯದ ಮುಂದೆ ಅಧಿವಿಚಾರಣೆ ನಡೆಯಲಿದೆ.

**ಹಾವೇರಿ** **(ಕೆ.ಸಿ. ಸದಾನಂದಸ್ವಾಮಿ)**

**ದಿನಾಂಕಃ 21/11/2024** **ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು**

**ಹಾಗೂ ವಿಶೇಷ ನ್ಯಾಯಾಧೀಶರು, ಹಾವೇರಿ**

**ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ವಿಶೇಷ ನ್ಯಾಯಾಧೀಶರ ನ್ಯಾಯಾಲಯ, ಹಾವೇರಿ.**

**ಪ್ರಕರಣ ಸಂಖ್ಯೆ: ಸ್ಪೆಷಲ್ ಎಸ್.ವಿ.ಸಿ. 2/2021**

ಫಿರ್ಯಾದಿ - ಸರಕಾರ – ಪ್ರತಿನಿಧಿಸುವವರು
ಸರಕಾರಿ ಅಭಿಯೋಜಕರು, ಹಾವೇರಿ.

**– ವಿರುದ್ಧ –**

ಆರೋಪಿ - ಪರಶುರಾಮ ತುಳಜಾರಾಮ ಶಹಪೂರ

**ಆರೋಪಿಯ ಹೇಳಿಕೆ**

ಪ್ರಶ್ನೆ-1 - ನಿಮ್ಮ ಮೇಲೆ ಓದಿ ಹೇಳಲಾದ ದೋಷಾರೋಪಣೆಯನ್ನು ತಿಳಿದುಕೊಂಡಿರುವಿರಾ?

ಉತ್ತರ - ತಿಳಿದಿದೆ.

ಪ್ರಶ್ನೆ-2 - ಸದರಿ ದೋಷಾರೋಪಣೆಯನ್ನು ಒಪ್ಪಿಕೊಳ್ಳುತ್ತೀರೋ ಅಥವಾ ಅಧಿವಿಚಾರಣೆ ಬಯಸುತ್ತೀರೋ?

ಉತ್ತರ - ದೋಷಾರೋಪಣೆ ಒಪ್ಪಿಕೊಳ್ಳುವುದಿಲ್ಲ. ವಿಚಾರಣೆಯಾಗಬೇಕು.

ಆರೋಪಿ ಸಹಿ

(ತೆರೆದ ನ್ಯಾಯಾಲಯದಲ್ಲಿ ಆರೋಪಿತರಿಗೆ ದೋಷಾರೋಪಣೆಯನ್ನು ಓದಿ ಹೇಳಲಾಗಿದ್ದು, ಅವರು ಕೊಟ್ಟ ಹೇಳಿಕೆಯನ್ನು, ನಾನೇ ಖುದ್ದು ದಾಖಲಿಸಿಕೊಂಡಿರುತ್ತೇನೆಂದು ದೃಢೀಕರಿಸುತ್ತೇನೆ.)

**ಸ್ಥಳ: ಹಾವೇರಿ**
**ದಿನಾಂಕ: 21/11/2024**

**ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು**
**ಹಾಗೂ ವಿಶೇಷ ನ್ಯಾಯಾಧೀಶರು, ಹಾವೇರಿ.**